2015

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಯಾದಗಿರಿ ಜಿಲ್ಲೆ, ಯಾದಗಿರಿ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ)ಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ನಅಇ:150:ಗುಅಪ್ರಾ:2013, ದಿ:01-03-2014.
2. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ ಯಾದಗಿರಿ, ಇವರ ಪತ್ರ ಸಂಖ್ಯೆ:ನಪ್ರಾಯಾ:ಮ.ಯೋ:2015-16, ದಿನಾಂಕ:24.06.2015.
3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ: ನಗ್ರಾಯೋ/ಗುವಿ(30)/ಯಾದಗಿರಿ/ಮಾ.ಯೋ(ಪ) (ಅಂತಿಮ)/2013-14 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ:09.07.2015 ಮತ್ತು 01.08.2015.

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಯಾದಗಿರಿ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ)ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರವು, ಯಾದಗಿರಿ ನಗರದ ಸ್ಥಳೀಯ ಯೊಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ (ಪ) (ಅಂತಿಮ) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)(2) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿದೆ.

ಮೇಲೆ ಓದಲಾದ (3)ರಲ್ಲಿ, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ, ಯಾದಗಿರಿ ಪಟ್ಟಣದ ಜನಸಂಖ್ಯೆಯು 2031ರಲ್ಲಿ 2,00,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ಯಾದಗಿರಿ ನಗರದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 2176.95 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ ಒಟ್ಟು 2176.95 ಹೆಕ್ಟೇರ್ ಪ್ರದೇಶದ ಪೈಕಿ, ವಸತಿಗಾಗಿ 1213.68 ಹೆಕ್ಟೇರ್ (ಶೇ.55.75), ವಾಣಿಜ್ಯಕ್ಕಾಗಿ 100.40 ಹೆಕ್ಟೇರ್ (ಶೇ.4.61), ಕೈಗಾರಿಕೆಗಾಗಿ 69.23 ಹೆಕ್ಟೇರ್, (ಶೇ.3.18), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 136.57 ಹೆಕ್ಟೇರ್, (ಶೇ.6.27) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 220.46 ಹೆಕ್ಟೇರ್ (ಶೇ.10.12) ಹಾಗೂ ಸಾರಿಗೆ/ ಸಂಚಾರ ವಲಯಕ್ಕೆ 419.81 ಹೆಕ್ಟೇರ್ (ಶೇಕಡ 19.30), ನಾಗರೀಕ ಸೌಲಭ್ಯಕ್ಕಾಗಿ 16.80 ಹೆಕ್ಟೇರ್ (ಶೇ.0.77) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು

ಕ್ರಮ ಸಂಖ್ಯೆ: 319
ದಿನಾಂಕ: 24/8/15

**ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.** ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 156 ಗುಅಪ್ರಾ 2015, ದಿನಾಂಕ.20.08.2015**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲೆ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರವು ತಯಾರಿಸಿ ಸಲ್ಲಿಸಿರುವ ಯಾದಗಿರಿ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ (ಪ)ಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(3)ರನ್ವಯ ಸರ್ಕಾರದ **ಅಂತಿಮ ಅನುಮೋದನೆಯನ್ನು ನೀಡಲಾಗಿದೆ.** ಮಹಾ ಯೋಜನೆ (ಪ)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಷರತ್ತು:

- ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
Rajendra 20/8/15
(ವಿ. ರಾಜೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಸದರಿ ಅಧಿಸೂಚನೆಯನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ ಪ್ರಕಟಿತ ಅಧಿಸೂಚನೆಯ 150 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸುವಂತೆ ಕೋರಲಾಗಿದೆ.

ಪ್ರತಿಯನ್ನು:

1. ಜಿಲ್ಲಾಧಿಕಾರಿಗಳು, ಯಾದಗಿರಿ ಜಿಲ್ಲೆ ಯಾದಗಿರಿ.
2. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಆಯುಕ್ತರು, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ, ಯಾದಗಿರಿ ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
4. ಜಂಟಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ವಿಭಾಗ, ಕಲಬುರಗಿ.
5. ನಗರ ಯೋಜನಾ ಸದಸ್ಯರು, ನಗರಾಭಿವೃದ್ಧಿ ಪ್ರಾಧಿಕಾರ, ಯಾದಗಿರಿ.
6. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಯಾದಗಿರಿ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.